# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 127 (1463) |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.12.2025 |
| ಉತ್ತರಿಸುವ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಮೂಲ ಆದಿವಾಸಿಗಳ ಅಭಿವೃದ್ಧಿಗಾಗಿ (ಜೇನು ಕುರುಬ, ಕೊರಗ ಮತ್ತು ಇತರೆ ಅರಣ್ಯ ಆಧಾರಿತ ಬುಡಕಟ್ಟು ಸಮುದಾಯ) ಮತ್ತು ಈ ಸಮುದಾಯಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಇತರೆ ವಿಷಯಗಳ ವಿಶೇಷ ಅಧ್ಯಯನಕ್ಕಾಗಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇದರ ಒಂದು ಘಟಕವಾಗಿ ಪ್ರಾರಂಭಿಸಲಾಗಿರುವ ಮೂಲ ಆದಿವಾಸಿ ಅಧ್ಯಯನ ಕೇಂದ್ರಕ್ಕೆ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡದೇ ಇರುವುದು ಮತ್ತು ಈ ಕೇಂದ್ರದ ಆಡಳಿತ ವರ್ಗಕ್ಕೆ ಪ್ರತ್ಯೇಕ ಸಿ&ಆರ್ ನಿಯಮಗಳನ್ನು ರಚನೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಆದೇಶದಂತೆ ಮೂಲ ಆದಿವಾಸಿಗಳ ಅಭಿವೃದ್ಧಿಗಾಗಿ ವಿಶೇಷ ಅಭಿವೃದ್ಧಿ ಯೋಜನೆ ರೂಪಿಸಲು ಮೂಲ ಆದಿವಾಸಿ ಅಧ್ಯಯನ ಕೇಂದ್ರವನ್ನು, ದಿನಾಂಕ:04-02-2015 ರಲ್ಲಿ ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಒಂದು ಘಟಕವನ್ನಾಗಿ ಪ್ರಾರಂಭಿಸಲಾಗಿರುತ್ತದೆ.<br><br>ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಗೆ ಒದಗಿಸಲಾಗುವ ಒಟ್ಟು ಅನುದಾನದಲ್ಲಿ ಈ ಘಟಕದ ಯೋಜನಾ ವೆಚ್ಚವನ್ನು ಭರಿಸಲಾಗುತ್ತಿದ್ದು, 2015 ರಿಂದ ಇಲ್ಲಿಯವರೆಗೆ ಮೂಲ ಆದಿವಾಸಿ ಅಧ್ಯಯನ ಕೇಂದ್ರದಿಂದ ಕೈಗೊಂಡಿರುವ ಅಧ್ಯಯನಗಳು ಮತ್ತು ಇತರೆ ಕಾರ್ಯಕ್ರಮಗಳಿಗಾಗಿ ಒಟ್ಟು ರೂ.1,88,58,151/- ಗಳ ವೆಚ್ಚ ಭರಿಸಲಾಗಿದೆ. |
| ಆ) | ಬಂದಿದ್ದಲ್ಲಿ, ಮೂಲ ಆದಿವಾಸಿ ಅಧ್ಯಯನ ಕೇಂದ್ರದ ಕಾರ್ಯ ಚಟುವಟಿಕೆಗಳಿಗೆ ಅಗತ್ಯವಿರುವ ಅನುದಾನವನ್ನು ಈ ಅಧ್ಯಯನ ಕೇಂದ್ರಕ್ಕೆ ನೇರವಾಗಿ ಬಿಡುಗಡೆ ಮಾಡಲು ಮತ್ತು ಈ ಕೇಂದ್ರದ ಆಡಳಿತ ವರ್ಗಕ್ಕೆ ಪ್ರತ್ಯೇಕ ಸಿ&ಆರ್ ನಿಯಮಗಳನ್ನು ರಚನೆ ಮಾಡಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದು.(ಮಾಹಿತಿ ನೀಡುವುದು) | ಆದಿವಾಸಿ ಅಧ್ಯಯನ ಕೇಂದ್ರವನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಒಂದು ಘಟಕವನ್ನಾಗಿ ರಚಿಸಿ ಆದೇಶಿಸಿರುವುದರಿಂದ ಪ್ರತ್ಯೇಕ ಸಿ & ಆರ್ ನಿಯಮಗಳನ್ನು ರಚಿಸಲು ಅವಕಾಶವಿರುವುದಿಲ್ಲ. |

| | | |
|---|---|---|
| ಇ) | 2025-26ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ 13 ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಇರುಳಿಗ, ಕೊರಗ, ಸೋಲಿಗ, ಯರವ, ಪಣಿಯನ್, ಹಲಸರು, ಗೌಡಲು, ಸಿದ್ದಿ, ಬೆಟ್ಟಕುರುಬ, ಕಾಡುಕುರುಬ, ಕುಡಿಯ ಮತ್ತು ಮಲೆಕುಡಿಯ ಈ ಜನಾಂಗಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ನೀಡುವ ಸಲುವಾಗಿ ವಿಶೇಷ ನೇರ ನೇಮಕಾತಿಯನ್ನು ಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: ಮಾಹಿತಿ ನೀಡುವುದು? | 2025-26ನೇ ಸಾಲಿನ ಆಯವ್ಯಯ ಕಂಡಿಕೆ 199 ರಲ್ಲಿ ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸಿಸುತ್ತಿರುವ 13 ಬುಡಕಟ್ಟು ಜನಾಂಗಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ನೀಡುವ ಸಲುವಾಗಿ ವಿಶೇಷ ನೇರ ನೇಮಕಾತಿ ಬಗ್ಗೆ ಘೋಷಿಸಲಾಗಿರುತ್ತದೆ.<br><br>ಸದರಿ ವಿಶೇಷ ನೇರ ನೇಮಕಾತಿ ಪ್ರಕ್ರಿಯೆ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಮತ್ತು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಗಳಿಂದ ಅಭಿಪ್ರಾಯ ಸ್ವೀಕೃತವಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ. |

STW/SECB/SAD/150/2025

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ